# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಸಂಖ್ಯೆ | : | 975 |
| ಸದಸ್ಯರ ಹೆಸರು | : | ಶ್ರೀ.ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 24-02-2022. |
| ಉತ್ತರಿಸುವ ಸಚಿವರು | : | ಮಾನ್ಯ ಮುಖ್ಯಮಂತ್ರಿಯವರು. |

| ಕ್ರ.ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| ಅ. | ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವಸತಿ ಶಾಲೆಗಳ ಬೋಧಕರಿಗೆ ವೃಂದ ಮತ್ತು ನೇಮಕಾತಿಯ ನಿಯಮಾವಳಿಗಳೇನು; ಈ ನಿಯಮಗಳನ್ವಯ ಇವರಿಗೆ ಕಾಲ ಕಾಲಕ್ಕೆ ಬಡ್ತಿ ನೀಡಲಾಗುತ್ತಿದೆಯೇ; | ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಲ್ಲಿ ಪ್ರಸ್ತುತ ಚಾಲ್ತಿಯಲ್ಲಿರುವ 2011ರ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಮುಂಬಡ್ತಿಯನ್ನು ನೀಡಲು ಕ್ರಮ ಕೈಗೊಳ್ಳಲಾಗಿದೆ. ಸದರಿ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು ಮಾತ್ರ ಸೇರ್ಪಡೆಯಾಗಿರುತ್ತದೆ.<br><br>2011ರ ನಂತರ ಮಂಜೂರಾದ ಮಾದರಿ ವಸತಿ ಶಾಲೆ (ನವೋದಯ), ಮೊರಾರ್ಜಿ ದೇಸಾಯಿ ವಸತಿ ಪದವಿ ಪೂರ್ವ ಕಾಲೇಜುಗಳ ಹುದ್ದೆಗಳನ್ನು ಸೇರಿಸಿ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪರಿಷ್ಕರಿಸುವ ಪ್ರಸ್ತಾವನೆಯು ಪರಿಶೀಲನೆಯಲ್ಲಿದೆ. |
| ಆ. | ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪರಿಷ್ಕರಿಸುವ ಪ್ರಸ್ತಾವನೆಯು ಸರ್ಕಾರದ ಮುಂದೆ ಇದೆಯೇ; ಹಾಗಿದ್ದಲ್ಲಿ ಪ್ರಸ್ತಾವನೆಯು ಯಾವ ಹಂತದಲ್ಲಿದೆ; ಯಾವ ಕಾಲಮಿತಿಯೊಳಗೆ ಪರಿಷ್ಕರಿಸಬಹುದು? (ವಿವರ ಒದಗಿಸುವುದು) | ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಸರ್ಕಾರದ ಅಧಿಸೂಚನೆ ಸಂಖ್ಯೆ: ಎಂಡಬ್ಲ್ಯೂಡಿ 154 ಎಂಡಿಎಸ್ 2010, ದಿನಾಂಕ:15.03.2011ರಲ್ಲಿ ರಚಿಸಲಾಗಿರುತ್ತದೆ.<br><br>2011ರ ನಂತರ ಹೊಸದಾಗಿ ಸೃಜಿಸಿ ಮಂಜೂರಾಗಿರುವ ಸುಮಾರು 50 ವಿವಿಧ ವೃಂದಗಳ ಹುದ್ದೆಗಳನ್ನು ಸೇರಿಸಿ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪರಿಷ್ಕರಿಸುವ ಪ್ರಸ್ತಾವನೆಯು ಪರಿಶೀಲನೆಯಲ್ಲಿದೆ.<br><br>ಪ್ರಸ್ತುತ ವೃಂದ ಮತ್ತು ನೇಮಕಾತಿ ನಿಯಮಗಳ ಪರಿಷ್ಕರಣೆ ಪ್ರಸ್ತಾವನೆಯು ಪರಿಶೀಲನಾ ಹಂತದಲ್ಲಿರುವುದರಿಂದ ಅನುಮೋದನೆ ಪಡೆದ ಕೂಡಲೇ ಪರಿಷ್ಕೃತ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪ್ರಕಟಿಸಲಾಗುವುದು. |

**ಸಂಖ್ಯೆ : MWD 65 LMQ 2022**

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ